# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** : 1961

ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 24-03-2026.

ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರತಿ ವರ್ಷ ಹಜ್ ಯಾತ್ರಾರ್ಥಿಗಳಿಗೆ ಜಿಲ್ಲಾವಾರು ಎಷ್ಟು ತರಬೇತಿ ಶಿಬಿರಗಳನ್ನು ನಡೆಸಲಾಗುತ್ತಿದೆ; ವಿಮಾನ ನಿಲ್ದಾಣಗಳಲ್ಲಿ (ಬೆಂಗಳೂರು ಮತ್ತು ಮಂಗಳೂರು) ಹಜ್ ಯಾತ್ರಾರ್ಥಿಗಳಿಗೆ ನೀಡುವ ವಿಶೇಷ ವ್ಯವಸ್ಥೆಗಳು ಯಾವುವು; | ರಾಜ್ಯದಲ್ಲಿ ಪ್ರತಿ ವರ್ಷ ಹಜ್ ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಕರ್ನಾಟಕ ರಾಜ್ಯ ಹಜ್ ಸಮಿತಿ ವತಿಯಿಂದ ಜಿಲ್ಲಾವಾರು ಮತ್ತು ವಲಯವಾರು ತಲಾ ಒಂದು ತರಬೇತಿ ಶಿಬಿರವನ್ನು ನಡೆಸಲಾಗುತ್ತದೆ.<br><br>ಬೆಂಗಳೂರು ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಹಜ್ ಯಾತ್ರಿಕರು ಸುಗಮ ಪ್ರಯಾಣವನ್ನು ಕೈಗೊಳ್ಳಲು ಬೆಂಗಳೂರು ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣ ಲಿಮಿಟೆಡ್ (BIAL) ರವರು ಪ್ರತಿ ವರ್ಷ ಪ್ರತ್ಯೇಕ ತಾತ್ಕಾಲಿಕ ಹಜ್ ಟರ್ಮಿನಲ್ ವ್ಯವಸ್ಥೆಯನ್ನು ಕಲ್ಪಿಸುತ್ತಾರೆ.<br><br>ಮಂಗಳೂರು ವಿಮಾನ ನಿಲ್ದಾಣದಿಂದ ಪ್ರಯಾಣ ಮಾಡುವ ಹಜ್ ಯಾತ್ರಿಕರಿಗೆ ಯಾವುದೇ ವಿಶೇಷ ಸೌಲಭ್ಯಗಳನ್ನು ಕಲ್ಪಿಸಲಾಗುವುದಿಲ್ಲ.<br><br>ಇನ್ನುಳಿದಂತೆ, ಎಲ್ಲಾ ಅಂತರ ರಾಷ್ಟ್ರೀಯ ಪ್ರಯಾಣಿಕರಿಗೆ ಒದಗಿಸಲಾಗುವ ಸೌಲಭ್ಯಗಳು ಹಜ್ ಯಾತ್ರಿಕರಿಗೂ ಅನ್ವಯವಾಗುತ್ತದೆ. |
| ಆ) | ಕಳೆದ ಮೂರು ವರ್ಷಗಳಲ್ಲಿ ಹಜ್ ಯಾತ್ರೆಗೆ ಸಂಬಂಧಿಸಿದಂತೆ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಹಜ್ ಸಮಿತಿಯ ಹಣಕಾಸು ಲೆಕ್ಕ ಪರಿಶೋಧನೆ (Audit) ವರದಿ ಸದನದ ಮುಂದೆ ಮಂಡಿಸಲಾಗಿದೆಯೇ; | ಕಳೆದ ಮೂರು ವರ್ಷಗಳಲ್ಲಿ ಹಜ್ ಯಾತ್ರೆಗೆ ಸಂಬಂಧಿಸಿದಂತೆ ಯಾವುದೇ ಪ್ರಕರಣಗಳು ದಾಖಲಾಗಿರುವುದಿಲ್ಲ.<br><br>ಕರ್ನಾಟಕ ರಾಜ್ಯ ಹಜ್ ಸಮಿತಿ ನಿಯಮಗಳು, 2025ನ್ನು ದಿನಾಂಕ:05-12-2025 ರಂದು ಹೊರಡಿಸಲಾಗಿದೆ.<br><br>ಸದರಿ ನಿಯಮಗಳಿಗನುಸಾರ ಕರ್ನಾಟಕ ರಾಜ್ಯ ಹಜ್ ಸಮಿತಿಯ ಆಂತರಿಕ ಲೆಕ್ಕ |

| | | |
|---|---|---|
| | | ಪರಿಶೋಧನೆಯನ್ನು ಕೈಗೊಂಡು ನಂತರ ರಾಜ್ಯ ಲೆಕ್ಕ ಪರಿಶೋಧನಾ ಇಲಾಖೆಯವರಿಂದ ನೀಡಲಾಗುವ ಆಡಿಟ್ ವರದಿಯನ್ನು ಉಭಯ ಸದನಗಳ ಮುಂದೆ ಮಂಡಿಸಲು ಕ್ರಮವಹಿಸಲಾಗುವುದು. |
| ಇ) | ರಾಜ್ಯ ವಕ್ಫ್ ಮಂಡಳಿ ಅಧೀನದಲ್ಲಿರುವ ಆಸ್ತಿಗಳ ಸಂಖ್ಯೆ ಎಷ್ಟು; ವಕ್ಫ್ ಆಸ್ತಿಗಳ ಅಕ್ರಮ ಅತಿಕ್ರಮಣ ಕುರಿತು ಸರ್ಕಾರ ಕೈಗೊಂಡ ಕ್ರಮಗಳು ಯಾವುವು? | ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಲ್ಲಿ ಪ್ರಸ್ತುತ ಲಭ್ಯವಿರುವ ದಾಖಲೆಯಂತೆ ಒಟ್ಟು 49155 ಆಸ್ತಿಗಳು ವಕ್ಫ್ ಮಂಡಳಿಯಲ್ಲಿ ನೋಂದಣಿಯಾಗಿರುತ್ತದೆ.<br><br>ಈ ಆಸ್ತಿಗಳ ಪೈಕಿ ರಾಜ್ಯದಲ್ಲಿನ ಒಟ್ಟು 4311 ವಕ್ಫ್ ಆಸ್ತಿಗಳು ಒತ್ತುವರಿಯಾಗಿದ್ದು, ವಕ್ಫ್ ಕಾಯಿದೆ 1995ರ ಕಲಂ 54 ರಡಿ 4311 ಪ್ರಕರಣಗಳನ್ನು ದಾಖಲಿಸಲಾಗಿದೆ.<br><br>ಈ ಪೈಕಿ 1980 ಪ್ರಕರಣಗಳನ್ನು ವಿಚಾರಣಾಧಿಕಾರಿಗಳು ಇತ್ಯರ್ಥಪಡಿಸಿದ್ದು, ಉಳಿದ 2331 ಪ್ರಕರಣಗಳು ವಿಚಾರಣಾ ಹಂತದಲ್ಲಿದೆ. |

**ಸಂಖ್ಯೆ:MWD 72 LMQ 2026**

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು